ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**309**
ಸದಸ್ಯರ ಹೆಸರು	:	ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	09-12-2020
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಪ್ರಶ್ನೆ	ಉತ್ತರ
(ಅ) ಪ್ರತಿ ವರ್ಷ ಎದುರಾಗುವ ನೆರೆ ಪ್ರವಾಹ, ಭೂ ಕುಸಿತ ತಪ್ಪಿಸಲು ಸರ್ಕಾರ ಏನಾದರೂ ಯೋಜನೆ ರೂಪಿಸಿದೆಯೇ;	ಹೌದು.
(ಆ) ರೂಪಿಸಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?	ಹಿಂದಿನ ವರ್ಷಗಳ ಪ್ರವಾಹ ಪರಿಸ್ಥಿತಿಯನ್ನು ಆಧರಿಸಿ ಪ್ರಸಕ್ತ ಸಾಲಿನಲ್ಲಿ ರಾಜ್ಯದ 11 ಜಿಲ್ಲೆಗಳ 511 ಗ್ರಾಮ ಪಂಚಾಯಿತಿಗಳಲ್ಲಿ ವಿಪತ್ತು ನಿರ್ವಹಣಾ ಯೋಜನೆ ಹಾಗೂ ಸಮುದಾಯ ಮಟ್ಟದಲ್ಲಿ ಪರಿಣಿತರ ರಕ್ಷಣಾ ತಂಡಗಳನ್ನು ರಚಿಸಿ ಪ್ರವಾಹ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿಭಾಯಿಸಲಾಗುತ್ತಿದೆ. ಅಲ್ಲದೆ, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ನೀತಿಯನ್ನು ರೂಪಿಸಿ ಪ್ರವಾಹ ಸಂದರ್ಭದಲ್ಲಿ ಜನರು ಯಾವ ರೀತಿ ಸ್ಪಂದಿಸಬೇಕೆಂಬುದರ ಬಗ್ಗೆ ವಿಸ್ತೃತವಾಗಿ ತಿಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಯೋಜನೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಇಲಾಖಾ ವಿಪತ್ತು ನಿರ್ವಹಣಾ ಯೋಜನೆಯನ್ನು ರಚಿಸಲಾಗಿದ್ದು, ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ಎದುರಿಸಲು ಕ್ರಮವಹಿಸಲಾಗಿದೆ. ವಿಪತ್ತು ನಿರ್ವಹಣಾ ಯೋಜನೆಗಳನ್ವಯ ಪ್ರವಾಹಕ್ಕೆ ಒಳಗಾಗುವ ಗ್ರಾಮಗಳ ಜನರಿಗೆ ಮುಂಜಾಗೃತಾ ಕ್ರಮವಾಗಿ ಸುರಕ್ಷಿತ ಸ್ಥಳಗಳಿಗೆ ತೆರಳಲು ತಿಳುವಳಿಕೆ ನೀಡಲಾಗುತ್ತದೆ. ಗುಡ್ಡಕುಸಿತಗಳಿಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆ ವತಿಯಿಂದ ಅಧ್ಯಯನ ತಂಡ ರಚಿಸಲಾಗಿದೆ. ಕೇಂದ್ರ ಸರ್ಕಾರದ ಜಿಯೋಲಾಜಿಕಲ್ ಸರ್ವೆ ಆಫ್ ಇಂಡಿಯಾ ವತಿಯಿಂದ ಭೂ ಕುಸಿತದ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ. ಯಾವುದೇ ನೈಸರ್ಗಿಕ ವಿಪತ್ತನ್ನು ಸಂಪೂರ್ಣವಾಗಿ ತಡೆಗಟ್ಟಲು ಸಾಧ್ಯವಿರುವುದಿಲ್ಲ. ಆದರೆ, ವಿಪತ್ತುಗಳ ಪರಿಣಾಮವನ್ನು ಉಪಶಮನ ಮಾಡಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಕೇಂದ್ರಿಯ 15ನೇ ಹಣಕಾಸು ಆಯೋಗವು ಪ್ರಸಕ್ತ ಸಾಲಿನಿಂದ SDRF ನಿಧಿಯೊಂದಿಗೆ ವಿಪತ್ತು ಉಪಶಮನ ನಿಧಿಯನ್ನು (SDMF) ನೀಡಿದೆ. ಈ ನಿಧಿಯ ಬಳಕೆಯ ಬಗ್ಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ನಿರೀಕ್ಷಿಸಲಾಗಿದೆ.

ಕಂಇ 619 ಟಿಎನ್‌ಆರ್ 2020

(ಆರ್. ಅಶೋಕ)
ಕಂದಾಯ ಸಚಿವರು